# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 05.06.2018**

## ***ಪಾಲಿಕೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಆಚರಿಸಿರುವ ಬಗ್ಗೆ***

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬಿಬಿಎಂಪಿ ವತಿಯಿಂದ ಇಂದು "ಪ್ಲಾಸ್ಟಿಕ್ ಮಾಲಿನ್ಯ ಹಿಮ್ಮೆಟ್ಟಿಸಿ" ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಪೂಜ್ಯ ಮಹಾಪೌರರು ಉದ್ಘಾಟಿಸಿದರು.

ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಬಿಬಿಎಂಪಿ ಜಿಲ್ಲಾ ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್‌ನ ಕಾಲೇಜು ವಿದ್ಯಾರ್ಥಿಗಳಿಂದ ಜಾಗೃತಿ ಅಭಿಯಾನವನ್ನು ನಗರದ ಪುರಭವನ(ಟೌನ್ ಹಾಲ್)ದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ವಿತರಿಸುವ ಮೂಲಕ ಚಾಲನೆ ನೀಡಿ, ನಡಿಗೆ ಮೂಲಕ ಪುರಭವನದಿಂದ ಹಲಸೂರು ಗೇಟ್ ಪೊಲೀಸ್ ಠಾಣೆ ಮುಖಾಂತರ ಹಡ್ಸನ್ ವೃತ್ತದಿಂದ ಬಿಬಿಎಂಪಿ ಕೇಂದ್ರ ಕಚೇರಿಯವರೆಗೆ ಜಾಗೃತಿ ಅಭಿಯಾನವನ್ನು ಸುಮಾರು 300 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಯಶಸ್ವಿಗೊಳಿಸಿದರು.

ತದನಂತರ, ಬಿಬಿಎಂಪಿ ಕೇಂದ್ರ ಕಛೇರಿಯ ಆವರಣದಲ್ಲಿ ಪೂಜ್ಯ ಮಹಾಪೌರರು ಸಸಿಗಳನ್ನು ನೆಡುವ ಮೂಲಕ ಈ ವರ್ಷದಲ್ಲಿ ಸುಮಾರು 75,000 ಕ್ಕಿಂತ ಹೆಚ್ಚು ಸಸಿಗಳನ್ನು ನೆಡುವ ಕಾರ್ಯಕ್ಕೆ ಚಾಲನೆ ನೀಡಿದರು. ಅಲ್ಲದೇ ಸದರಿ ವಿದ್ಯಾರ್ಥಿಗಳಿಂದ ಪರಿಸರದ ಬಗ್ಗೆ ಚಿತ್ರ ಬಿಡಿಸುವ ಸ್ಪರ್ಧೆಯನ್ನು ಏರ್ಪಡಿಸಿ ಮಕ್ಕಳಲ್ಲಿ ಪರಿಸರದ ಕಾಳಜಿಯನ್ನು ಪ್ರೋತ್ಸಾಹಿಸುವ ಕಾರ್ಯಕ್ರಮವನ್ನು ಇಂದು ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಗಿದೆ.

ಈ ಸಂದರ್ಭದಲ್ಲಿ ಪೂಜ್ಯ ಮಹಾಪೌರರಾದ ಶ್ರೀ ಆರ್.ಸಂಪತ್‌ರಾಜ್ ರವರು, ತೋಟಗಾರಿಕೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ಉಮೇಸಲ್ಮ ರವರು, ಆಡಳಿತ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ. ಲಕ್ಷ್ಮೀನಾರಾಯಣ್ ರವರು ಹಾಗೂ ಸ್ಕೌಟ್ಸ್ ಆಂಡ್ ಗೈಡ್ಸ್ ಮಾನ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್.ಸಿಂಧ್ಯಾ ರವರು, ವಿಶೇಷ ಆಯುಕ್ತರಾದ ಶ್ರೀ ವಿಜಯ್ ಶಂಕರ್, ಶ್ರೀ ರವೀಂದ್ರ ಇನ್ನೂ ಮುಂತಾದ ಹಿರಿಯ ಅಧಿಕಾರಿಗಳು ಹಾಜರಿದ್ದರು.

**ಸದರಿ ಮಾಹಿತಿಯನ್ನು ತಮ್ಮ ಪತ್ರಿಕಾ ಮಾಧ್ಯಮದಲ್ಲಿ ಪ್ರಕಟಿಸುವಂತೆ ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**